**ದಿನಾಂಕ: 05-03-2022 ರಂದು ಸಮಯ 10.30 ಗಂಟೆಗೆ ವಾರ್ಡ್ 154-ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ಧೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಗಿರೀಶ, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ಬಾಲಕೃಷ್ಣ. ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-154.
5. ಶ್ರೀ. ರಮೇಶ್ ಅರಿಸಿಕೆರಿ, Water Inspector, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್-154
6. ಶ್ರೀ.ಸದಾನಂದ, ಪೋಲೀಸ್ ಬಸವನಗುಡಿ ಸಂಚಾರಿ ಠಾಣೆ
7. ಶ್ರೀ. ಮುನಿರಾಜು ಕೆ., ಕಿರಿಯ ಅಭಿಯಂತರರು, BESCOM ವಾರ್ಡ್ 154
8. ಶ್ರೀ. ಎನ್. ನಾರಾಯಣ, ಕಂದಾಯ ಪರಿವೀಕ್ಷಕರು, ವಾರ್ಡ್ 154
9. ಶ್ರೀ. ಸತೀಶ್ ಸ.ಅ. ಬೃಹತ್ ಮಳೆನೀರುಗಾಲುವೆ.

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸುತ್ತ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಕೆ.ಆರ್. ರಸ್ತೆಯಲ್ಲಿ ಒಂದು ಅಪಾರ್ಟಮೆಂಟ್ ನಿರ್ಮಾಣವಾಗುತ್ತಿದ್ದು ಸದರಿ ಅಪಾರ್ಟಮೆಂಟ್‌ದಲ್ಲಿ ಕಾಯಾನಿರ್ವಹಿಸುತ್ತಿದ್ದ ಕಾರ್ಮಿಕರು ಉಪಯೋಗಿಸುತ್ತಿದ್ದ ಸೌಚಾಲಯದ ಸ್ಯಾನಿಟರಿ ನೀರನ್ನು ಹೊರಗಡೆ ಬಿಡುತ್ತಿದ್ದು ಇದರ ದುರ್ವಾಸನೆಯಿಂದ ಸುತ್ತಮುತ್ತಲಿನ ಸಾರ್ವಜನೀಕರಿಗೆ ತುಂಬ ತೊಂದರೆಯಾಗುತ್ತಿದ್ದು ಇದರ ಕುರಿತು ಸೂಕ್ತ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

**ಕ್ರಮ: - ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ154,**
**ಸಹಾಯಕ ಅಭಿಯಂತರರು ವಾರ್ಡ್-154**
**ರವರಿಗೆ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.**

**ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ರಸ್ತೆ ಬದಿ ಚರಂಡಿಯ ಶೋಲ್ಡರ್ ಡ್ರೇನನ್ನು ಕ್ಲೀನ್ ಮಾಡಲು ಕ್ರಮವಹಿಸಲು ಸೂಚಿಸಲಾಗಿದೆ.**

**ಕ್ರಮ: - ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ154,**
**ಸಹಾಯಕ ಅಭಿಯಂತರರು ವಾರ್ಡ್-154**
**ರವರಿಗೆ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.**

**ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ನಾಗಸಂದ್ರ ವೃತ್ತದಲ್ಲಿರುವ ಕಡೂರು ವೈಶ್ಯ ಬ್ಯಾಂಕ್ ಎದುರು ಟೈಲ್ಸ ಮುರಿದುಹೋಗಿದ್ದು ಇದನ್ನು ಸರಿಪಡಿಸಲು ಕ್ರಮವಹಿಸಲು ಸೂಚಿಸಿದರು.**

**ಕ್ರಮ: - ಸಹಾಯಕ ಅಭಿಯಂತರರು**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಎನ್.ಆರ್.ಕಾಲೋನಿ ಬಸವನಗುಡಿ ಕೊ.ಆಪ್. ಸೊಸೈಟಿ ಎದುರು ಇರುವ ಹಳೇಕಾಲದ ಹೈಲೊಜನ್ ಲೈಟನ್ನು ತೆಗೆದು ಎಲ್.ಇ.ಡಿ.ಲೈಟನ್ನು ಅಳವಡಿಸಲು ಸುತ್ತಮುತ್ತಲಿನ ಸಾರ್ವಜನೀಕರು ಮನವಿಯನ್ನು ಮಾಡಿಕೊಂಡಿರುವುದರಿಂದ ಇದನ್ನು ಬದಲಾಯಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಸಹಾಯಕ ಅಭಿಯಂತರರು,ವಿದ್ಯುತ್ ದಕ್ಷಿಣ**
**ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಎನ್.ಆರ್.ಕಾಲೋನಿ ಬಸವನಗುಡಿ ಬಸ್ ನಿಲ್ದಾಣದ ಸುತ್ತಮುತ್ತಲು ಇರುವ ಮರಗಳ ಒಣಗಿದ ರೆಂಬೆಗಳನ್ನು ತೆಗೆಯಲು ಸುತ್ತಮುತ್ತಲಿನ ಸಾರ್ವಜನೀಕರು ಮನವಿಯನ್ನು ಮಾಡಿಕೊಂಡಿರುವುದರಿಂದ ಇದನ್ನು ತೆಗೆಯಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಅರಣ್ಯಾಧಿಕಾರಿಗಳು (ದಕ್ಷಿಣ)ರವರಿಗೆ,**
**ಕ್ರಮ ವಹಿಸಲು ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಬಿಡಾಡಿ ವಾಹನಗಳನ್ನು ತೆರವುಗೊಳಿಸಲು ಸುತ್ತಮುತ್ತಲಿನ ಸಾರ್ವಜನೀಕರು ಮನವಿಯನ್ನು ಮಾಡಿಕೊಂಡಿರುವುದರಿಂದ ಇದನ್ನು ತೆರವುಗೊಳಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಪೊಲೀಸ್ ಇನ್ಸಪೆಕ್ಟರ್, ಬಸವನಗುಡಿ ಪೋಲೀಸ್**
**ಸಂಚಾರಿ ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

AE154 5/3

05/3

**ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ**
**ವಾರ್ಡ್ ಸಂಖ್ಯೆ 154–ಬಸವನಗುಡಿ**

**<u>ಪ್ರತಿಯನ್ನು:</u>**

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
9) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
10) ಕಛೇರಿ ಕಡತಕ್ಕೆ.